ಉಪನಿರ್ದೇಶಕರು (ಆಡಳಿತ) ರವರ ಕಚೇರಿ

ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಉತ್ತರ ಜಿಲ್ಲೆ, ಬೆಂಗಳೂರು

---

**2022–23 ನೇ ಸಾಲಿನ ಎಸ್.ಎಸ್.ಎಲ್.ಸಿ ಪರೀಕ್ಷಾ ಫಲಿತಾಂಶ ಉತ್ತಮಪಡಿಸಲು ರಚಿಸಲಾಗಿರುವ ಅಭ್ಯಾಸ ಪತ್ರಿಕೆಗಳು**

**ವಿಷಯ: 01 K–ಪ್ರಥಮ ಭಾಷೆ – ಕನ್ನಡ**

**ಗರಿಷ್ಠ ಅಂಕಗಳು: 100** **ಸಮಯ : 03.15ಗಂಟೆಗಳು**

********************************************************************************

## ಅಭ್ಯಾಸ ಪತ್ರಿಕೆ–1

********************************************************************************

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಪರ್ಯಾಯ ಆಯ್ಕೆಗಳನ್ನು ಕೊಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ. 6x1=6**

1. ಸ್ವತಂತ್ರ ವಾಕ್ಯಗಳಾಗಿ ನಿಲ್ಲಬಲ್ಲ ಅನೇಕ ಉಪವಾಕ್ಯಗಳೊಡನೆ ಒಂದು ಪೂರ್ಣಾಭಿಪ್ರಾಯದ ವಾಕ್ಯವಾಗಿದ್ದರೆ ಅಂತಹ ವಾಕ್ಯವು–

   (ಎ) ಸಾಮಾನ್ಯ ವಾಕ್ಯ (ಬಿ) ಸಂಯೋಜಿತ ವಾಕ್ಯ

   (ಸಿ) ನಿಷೇಧಾರ್ಥಕ ವಾಕ್ಯ (ಡಿ) ಮಿಶ್ರವಾಕ್ಯ

2. 'ಸಂಪ್ರದಾನ' ಕಾರಕಾರ್ಥವು ಈ ವಿಭಕ್ತಿಯದ್ದಾಗಿದೆ.

   (ಎ) ಪ್ರಥಮಾ (ಬಿ) ತೃತೀಯಾ

   (ಸಿ) ಚತುರ್ಥೀ (ಡಿ) ಸಪ್ತಮೀ

3. ಕ್ರಿಯಾಪದದ ಸ್ಥಾನದಲ್ಲಿದ್ದು, ವಾಕ್ಯದ ಅರ್ಥವನ್ನು ಪೂರ್ಣಗೊಳಿಸುವ ಅವ್ಯಯವನ್ನು ಹೀಗೆನ್ನುವರು.

   (ಎ) ಸಾಮಾನ್ಯಾವ್ಯಯ (ಬಿ) ಅನುಕರಣಾವ್ಯಯ

   (ಸಿ) ಭಾವಸೂಚಕಾವ್ಯಯ (ಡಿ) ಕ್ರಿಯಾರ್ಥಕಾವ್ಯಯ

4. 'ದೇವೇಂದ್ರ' ಪದವು ಈ ಸಂಧಿಗೆ ಉದಾಹರಣೆ :

   (ಎ) ವೃದ್ಧಿ ಸಂಧಿ (ಬಿ) ಸವರ್ಣದೀರ್ಘಸಂಧಿ

   (ಸಿ) ಗುಣ ಸಂಧಿ (ಡಿ) ಯಣ್ ಸಂಧಿ

5. 'ಚಕ್ರಪಾಣಿ' ಪದವು ಈ ಸಮಾಸಕ್ಕೆ ಉದಾಹರಣೆ:

   (ಎ) ಕರ್ಮಧಾರಯ ಸಮಾಸ (ಬಿ) ತತ್ಪುರುಷ ಸಮಾಸ

   (ಸಿ) ಅಂಶಿ ಸಮಾಸ (ಡಿ) ಬಹುವ್ರೀಹಿ ಸಮಾಸ

6. ಒಂದು ಪದವನ್ನೋ ವಾಕ್ಯವನ್ನೋ ಹೇಳಿ ಅದಕ್ಕೆ ಸಮಾನಾರ್ಥಕ ಪದವನ್ನೋ ವಾಕ್ಯವನ್ನೋ ಹೇಳುವಾಗ ಈ ಚಿಹ್ನೆಯನ್ನು ಬಳಸಲಾಗುತ್ತದೆ.

   (ಎ) ಪ್ರಶ್ನಾರ್ಥಕ (ಬಿ) ಉದ್ಧರಣ

   (ಸಿ) ಆವರಣ (ಡಿ) ವಿವರಣಾತ್ಮಕ

**II. ಕೆಳಗಿನ ಪ್ರಶ್ನೆಗಳಿಗೆ ಮೊದಲೆರಡು ಪದಗಳಿಗೆ ಇರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ. 4x1=4**

7. ಆ ಈ ಊ : ದೀರ್ಘ ಸ್ವರ :: ಅ ಇ ಉ ಋ : __________

8. ಅಷ್ಟು : ಪರಿಮಾಣ ವಾಚಕ :: ಹನ್ನೆರಡು : ______________

9. ಕಬ್ಬ : ಕಾವ್ಯ :: ಬೇಹಾರಿ : _________________________

10. ತನುಜ : ಮಗ :: ಸಖ : __________________________

**III. ಕೆಳಗಿನ ಪ್ರಶ್ನೆಗಳಿಗೆ ಪ್ರತಿಯೊಂದಕ್ಕೂ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ.** **7x1=7**

11. ಯಾವ ವ್ಯಕ್ತಿ ನಮಗೆ ಆದರ್ಶವಾಗಬಲ್ಲನು?
12. ಇಂದಲ್ಲ ನಾಳೆ ಫಲಕೊಡುವ ಅಂಶಗಳಾವುವು?
13. ಬಾಳು ಹಸನಾಗಬೇಕಾದರೆ ಯಾವುದನ್ನು ಮೀರಬೇಕು?
14. ಧರ್ಮಾಧಿಕರಣರು ವಟವೃಕ್ಷದ ಸಮೀಪ ಏಕೆ ಬಂದರು?
15. ಹಕ್ಕಿಯ ಕಣ್ಣುಗಳು ಯಾವುವು?
16. ದಿನಪಸುತ ಎಂದರೆ ಯಾರು?
17. ಯಾರಿಗೆ ವಸಂತ ಮುಖ ತೋರಲಿಲ್ಲ?

**IV. ಕೆಳಗಿನ ಪ್ರಶ್ನೆಗಳಿಗೆ ಮೂರು – ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ.** **10x2=20**

18. ರಾಮನ ಸ್ವಾಗತಕ್ಕಾಗಿ ಶಬರಿ ಮಾಡಿಕೊಂಡಿದ್ದ ಸಿದ್ಧತೆಗಳೇನು?
19. ವ್ಯಕ್ತಿಗಳನ್ನು ಆದರ್ಶವಾಗಿ ಸ್ವೀಕರಿಸಲು ಇರುವ ತೊಡಕುಗಳೇನು?
20. ಋಣಕ್ಕೂ ಧರ್ಮಕ್ಕೂ ಇರುವ ಸಂಬಂಧಗಳೇನು?
21. ದುಷ್ಟಬುದ್ಧಿಯು ತನ್ನ ತಂದೆಗೆ ಏಕಾಂತದಲ್ಲಿ ಏನೆಂದು ಹೇಳಿದನು?
22. ಹೊಸಗಾಲದ ಹಸು ಮಕ್ಕಳನ್ನು ಹಕ್ಕಿ ಹೇಗೆ ಹರಸಿದೆ?
23. ಹಲಗಲಿಗೆ ದಂಡು ಬರಲು ಕಾರಣವೇನು?
24. ಬಾಳಿನಲ್ಲಿ ತೃಪ್ತಿ ದೊರೆಯಬೇಕಾದರೆ ಏನು ಮಾಡಬೇಕೆಂಬುದು ವಿವೇಕಾನಂದರ ಅಭಿಪ್ರಾಯವಾಗಿದೆ?

25 ಜಲಿಯನ್ ವಾಲಾಬಾಗ್‌ನಲ್ಲಿರುವ ಒಕ್ಕಣೆ ಬರೆಯಿರಿ.

26. ಆಗ ಕರ್ಪೂರಕ್ಕೆ ಕಾದಾಡಿದ ಮನಸ್ಸುಗಳು ಮರುಗಿವೆ ಏಕೆ?
27. ಹಾಡು ಕಿವಿಗೆ ಬಿದ್ದಾಗ ಪೈಗಳು ಏನು ಮಾಡಿದರು?

**V. ಕೆಳಗಿನ ಕವಿ/ಸಾಹಿತಿಗಳ ಸ್ಥಳ,ಕಾಲ,ಕೃತಿ ಮತ್ತು ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ.** **2x3=6**

28. ವಿ.ಕೃ.ಗೋಕಾಕ್
29. **ಲಕ್ಷ್ಮೀಶ**

**VI. ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗಿಸಿ, ಛಂದಸ್ಸಿನ ಹೆಸರನ್ನು ಬರೆಯಿರಿ.** **1x3=3**

30. ಕಾದದಿರೆನಜ್ಜ ಪಾಂಡವ
ರಾದರ್ ಮೇಣಿಂದಿನೊಂದೆ ಸಮರದೊಳಾಂ ಮೇ

**VII. ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿರಿ.** **1x3=3**

31. "ನೀಚರಿಗೆ ಮಾಡಿದ ಉಪಕಾರವು ಹಾವಿಗೆ ಹಾಲೆರೆದಂತೆ"

**VIII. ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಒಂದನ್ನು ಗಾದೆಯ ಮಹತ್ತ್ವದೊಂದಿಗೆ ವಿಸ್ತರಿಸಿ ಬರೆಯಿರಿ.** **1x3=3**

32. ಕೈ ಕೆಸರಾದರೆ ಬಾಯಿ ಮೊಸರು

**<u>ಅಥವಾ</u>**

ಗಿಡವಾಗಿ ಬಗ್ಗದ್ದು ಮರವಾಗಿ ಬಗ್ಗೀತೆ?

**IX. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ.** **6x3=18**

33) "ತಾಯಿ, ದಾರಿಗರಿಗೆ ಬೀಡಿಲ್ಲಿ ದೊರೆಯುವುದೇ?."
34) "ಸಂಪತ್ತು ಸಿಕ್ಕಿತು ಎಂಬ ಮಾತ್ರಕ್ಕೆ ಸುಖವುಂಟೆ."
35) "ಯಾವ ಜೀವಿಯೂ ತನ್ನಷ್ಟಕ್ಕೆ ತಾನಿಲ್ಲ"

36) "ಹೊಡೆದರೊ ಗುಂಡ ಕರುಣೆ ಇಲ್ಲದಂಗ"

37) "ನಿನ್ನಪದೆಸೆಯ ಬಯಸುವನಲ್ಲ"

38) "ವಿದ್ಯಾಧನಮೆ ಧನಮಪ್ಪುದು"

**X. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ. 1x4=4**

39. ಕಲುಷಿತವಾದೀ ________________

___________________________

___________________________

________________ ಮುಟ್ಟೋಣ ।

**ಅಥವಾ**

ಮತಗಳೆಲ್ಲವೂ ________________

___________________________

___________________________

_______________________ಬಿತ್ತೋಣ ।

**XI. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶವನ್ನು ಬರೆಯಿರಿ**

40. **1x4=4**

**ನೆಲಕಿಱಿವೆನೆಂದು ಬಗೆದಿರೆ**

**ಚಲಕಿಱಿವೆಂ ಪಾಂಡುಸುತರೊಳೀನೆಲನಿದು ಪಾ**

**ಟ್ನೆಲನೆನಗೆ ದಿನಪಸುತನಂ**

**ಕೊಲಿಸಿದ ನೆಲನೊಡನೆ ಮತ್ತೆ ಪುದುವಾಟ್ಟಪೆನೇ**

**XII. ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ. 2x4=8**

41. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಮೈಸೂರು 'ಮಾದರಿ ಮೈಸೂರು ರಾಜ್ಯ' ಹೇಗಾಯಿತು?

**ಅಥವಾ**

ವಿಶ್ವೇಶ್ವರಯ್ಯನವರು ಮೈಸೂರು ದಿವಾನರಾಗಿ ಸಲ್ಲಿಸಿದ ಸೇವೆಯನ್ನು ಕುರಿತು ಬರೆಯಿರಿ.

42. 'ಹಸುರು' ಕವನದ ರಿತ್ಯ ಎಲ್ಲೆಲ್ಲಿ ಹಸುರು ವ್ಯಾಪಿಸಿದೆ ಎಂಬುದನ್ನು ವಿವರಿಸಿ.?

**ಅಥವಾ**

ಪ್ರಕೃತಿಯ 'ಹಸುರು' ಜೀವ ಜಗತ್ತಿಗೆ ಎಷ್ಟು ಮುಖ್ಯ ಎಂಬುದನ್ನು ಕುರಿತು ನಿಮ್ಮ ಅಭಿಪ್ರಾಯಗಳನ್ನು ಬರೆಯಿರಿ.

**XIII. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ.1x04 =04 (2+2)**

ದೇವರ ಗುಡ್ಡರು ಜನಪದ ಮಹಾಕಾವ್ಯಗಳಲ್ಲೊಂದಾದ ಮಲೆಯ ಮಹದೇಶ್ವರನ ಕಥೆಯನ್ನು ಪ್ರಧಾನವಾಗಿ ಹಾಡುತ್ತಾರೆ. ಇದಲ್ಲದೆ ಪಿರಿಯಾಪಟ್ಟಣದ ಕಾಳಗ, ಸಾರಂಗಧರ, ಬಿಳಿಗಿರಿ ರಂಗಸ್ವಾಮಿ, ಬೆಟ್ಟದ ಚಾಮುಂಡಿ, ಬಾಲನಾಗಮ್ಮ, ಮುಡುಕುತೊರೆ ಮಲ್ಲಪ್ಪ, ಕೋಳೂರ ಕೊಡಗೂಸು ಮೊದಲಾದ ಲೌಕಿಕ, ಧಾರ್ಮಿಕ ಹಾಗೂ ಐತಿಹಾಸಿಕ ಕಾವ್ಯಗಳನ್ನು ಹಾಡುತ್ತಾರೆ. ಮಂಟೇಸ್ವಾಮಿ ಕಾವ್ಯವನ್ನು ಅದರಲ್ಲೂ ಸಿದ್ದಪ್ಪಾಜಿಗೆ ಸಂಬಂಧಿಸಿದ ಭಾಗವನ್ನು ಕಂಸಾಳೆ ಗತ್ತಿಗೆ ಅಳವಡಿಸಿಕೊಂಡು ಹಾಡುತ್ತಾರೆ.

ಬೀಸುಕಂಸಾಳೆ ದೇವರಗುಡ್ಡರ ವಿಶಿಷ್ಟ ನೃತ್ಯ. ಕರ್ನಾಟಕದ ಜನಪದ ನೃತ್ಯಗಳಲ್ಲಿ ಅಪೂರ್ವವಾದುದು. ಇದರಲ್ಲಿ ತಾರ್‌ಬಟ್ಲು, ತಟ್‌ಬಟ್ಲು ಮುಂತಾದ ಬಗೆಗಳಿವೆ. ನಾಲ್ಕು ಮಂದಿ ಗುಡ್ಡರು ಒಂದು ಕಡೆ ನಿಂತು ಲಿಂಗ ಬಾ, ಮುದ್ದುಲಿಂಗ ಬಾ, ನಮ್ಮ ಮುದ್ದು ಮಾದಯ್ಯನ ಲಿಂಗ ಬಾ ಎಂದು ಹಾಡುತ್ತಾರೆ. ಕಂಸಾಳೆ ಹಿಡಿದ ಗುಡ್ಡ ತಾಳಕ್ಕೆ ತಕ್ಕಂತೆ ವಿವಿಧ

ವಿನ್ಯಾಸದಲ್ಲಿ ಬಾರಿಸುತ್ತ ಕುಣಿಯುತ್ತಾನೆ. ತಲೆಯ ಮೇಲೆ, ಬೆನ್ನ ಹಿಂದೆ, ಕಾಲ ಕೆಳಗೆ, ಕುಳಿತು, ನಿಂತು, ಬಾಗಿ, ಬಳುಕಿ ತೀವ್ರಗತಿಯಲ್ಲಿ ನರ್ತಿಸುವ ಭಂಗಿ ಆಶ್ಚರ್ಯಕರ ಹಾಗೂ ಅದ್ಭುತ. ಒಮ್ಮೊಮ್ಮೆ ಇಬ್ಬರು ಗುಡ್ಡರು ಕಲೆತು ನರ್ತಿಸುವುದುಂಟು. ಒಬ್ಬರ ಕಂಸಾಳೆಗೆ ಮತ್ತೊಬ್ಬರು ಕುಟ್ಟುತ್ತಾ ಕುಣಿಯುವ ವೈಖರಿ ಆಕರ್ಷಕವಾಗಿರುತ್ತದೆ.

**43. ಪ್ರಶ್ನೆಗಳು:**

ಅ) ದೇವರ ಗುಡ್ಡರು ಯಾವ ಯಾವ ಕಾವ್ಯಗಳನ್ನು ಹಾಡುತ್ತಾರೆ?

ಆ) ಬೀಸು ಕಂಸಾಳೆ ನೃತ್ಯವನ್ನು ಕುರಿತಾಗಿ ಬರೆಯಿರಿ.

**XIV. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ, ಪತ್ರ ಬರೆಯಿರಿ. 1x5=5**

44. ನಿಮ್ಮನ್ನು ಬೆಂಗಳೂರಿನ ಸಂತ ಫಿಲೋಮಿನಾ ಪ್ರೌಢಶಾಲೆಯ ಸುರಜ್/ ಸಂಧ್ಯಾ ಎಂದು ಭಾವಿಸಿಕೊಂಡು, ನಿಮ್ಮ ಶಾಲೆಯಲ್ಲಿ ನಡೆದ ಮಕ್ಕಳ ದಿನಾಚರಣೆ ಕಾರ್ಯಕ್ರಮವನ್ನು ವಿವರಿಸಿ ನಿಮ್ಮ ಗೆಳೆಯ/ಗೆಳತಿಗೊಂದು ಪತ್ರ ಬರೆಯಿರಿ.

**ಅಥವಾ**

ನಿಮ್ಮನ್ನು ಬಿಜಾಪುರ ಸರ್ಕಾರಿ ಪ್ರೌಢಶಾಲೆಯ ನಂದನ್ ಎಂದು ಭಾವಿಸಿಕೊಂಡು, ಶಾಲಾ ಕೈತೋಟ ನಿರ್ಮಿಸುವ ಸಲುವಾಗಿ ಗಿಡಗಳನ್ನು ಕೊಡುವಂತೆ ಕೋರಿ, ತೋಟಗಾರಿಕಾ ಇಲಾಖೆಯ ಅಧಿಕಾರಿಗಳಿಗೆ ಮನವಿ ಪತ್ರ ಬರೆಯಿರಿ.

**XV. ಕೆಳಗಿನ ಯಾವುದಾದರೂ ಒಂದು ವಿಷಯದಲ್ಲಿ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ. 1x5=5**

45. ರಾಷ್ಟ್ರೀಯ ಭಾವೈಕ್ಯತೆ

**ಅಥವಾ**

ಮತದಾನದ ಜಾಗೃತಿ ಮೂಡಿಸುವಲ್ಲಿ ವಿದ್ಯಾರ್ಥಿಗಳ ಪಾತ್ರ

※※※※※